Akashvani : Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

05.11.2026 / 19.35 hrs

ಮುಖ್ಯಾಂಶಗಳು

- ದೇಶದ ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ ೩೦೦ ಗಿಗಾವ್ಯಾಟ್ ದಾಟಿದೆ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
- ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ
- ೧೮೫೭ರ ಸ್ವಾತಂತ್ರ್ಯ ಸಂಗ್ರಾಮದ ಹುತಾತ್ಮರ ಗೌರವಾರ್ಥ ಹರಿಯಾಣದಲ್ಲಿ ನಿರ್ಮಿಸಲಾದ ಸ್ಮಾರಕ ಉದ್ಘಾಟಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ
- ಅಂತಾರಾಷ್ಟ್ರೀಯ ಫುಟ್ಬಾಲ್‌ಗೆ ನಿವೃತ್ತಿ ಘೋಷಿಸಿದ ಫುಟ್ಬಾಲ್ ದಿಗ್ಗಜ ಕ್ರಿಸ್ಟಿಯಾನೊ ರೊನಾಲ್ಡೊ

ಭಾರತದ ಸಾಂಪ್ರದಾಯಿಕ ಜ್ಞಾನವು ಸದಾ ಪ್ರಕೃತಿಯ ಮೇಲಿನ ಗೌರವ ಮತ್ತು ನೈಸರ್ಗಿಕ ಸಂಪನ್ಮೂಲಗಳ ಜವಾಬ್ದಾರಿಯುತ ಬಳಕೆಯನ್ನು ಒತ್ತಿಹೇಳುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ಭಾರತ ನವೀಕರಿಸಬಹುದಾದ ಇಂಧನ ಶೃಂಗಸಭೆ ಮತ್ತು ವಸ್ತುಪ್ರದರ್ಶನ'ದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಸುಸ್ಥಿರತೆಯು ದೇಶದ ಪ್ರಾಚೀನ ಸಂಪ್ರದಾಯಗಳಲ್ಲಿ ಬೇರೂರಿದೆ. ಈಗ ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನದ ಮೂಲಕ ಅದನ್ನು ಬಲಪಡಿಸಲಾಗುತ್ತಿದೆ ಎಂದರು.

ಪಳೆಯುಳಿಕೆ ಇಂಧನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವಾಗ ಭಾರತ, ತ್ವರಿತ ಆರ್ಥಿಕ ಬೆಳವಣಿಗೆ ಸಾಧಿಸಿದೆ. ದೇಶದ ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ ೩೦೦ ಗಿಗಾವ್ಯಾಟ್ ದಾಟಿದೆ ಎಂದು ಅವರು ತಿಳಿಸಿದರು.

ಪರಿಸರ ಬದ್ಧತೆಗಳು ಆರ್ಥಿಕ ಬೆಳವಣಿಗೆಗೆ ಅಡೆತಡೆಗಳಲ್ಲ, ಬದಲಾಗಿ ಭಾರತದ ಅಭಿವೃದ್ಧಿಗೆ ವೇಗವರ್ಧಕಗಳಾಗಿವೆ. ನವೀಕರಿಸಬಹುದಾದ ಇಂಧನ ವಲಯವು ಕೈಗೆಟುಕುವ ವಿದ್ಯುತ್, ಕಡಿಮೆ

ಕೈಗಾರಿಕಾ ವೆಚ್ಚ, ಉದ್ಯೋಗ ಉತ್ಪಾದನೆ ಮತ್ತು ಕಡಿಮೆ ಆಮದು ಬಿಲ್‌ಗಳಿಗೆ ಕೊಡುಗೆ ನೀಡುತ್ತಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ಕಳೆದ ದಶಕದಲ್ಲಿ ಭಾರತದ ನವೀಕರಿಸಬಹುದಾದ ಇಂಧನ ವಲಯ ೧೫ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಹೂಡಿಕೆ ಆಕರ್ಷಿಸಿದೆ ಎಂದು ತಿಳಿಸಿದರು.

ಜಪಾನ್‌ನ ಐಚಿ ನಗೋಯಾದಲ್ಲಿ ಇತ್ತೀಚೆಗೆ ಮುಕ್ತಾಯಗೊಂಡ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಪ್ಯಾರಾ-ಕ್ರೀಡಾಪಟುಗಳು ತೋರಿದ ಅತ್ಯುತ್ತಮ ಪ್ರದರ್ಶನವು, ಭಾರತ ಕ್ರೀಡಾ ಜಗತ್ತಿನಲ್ಲಿ ಒಂದು ದೊಡ್ಡ ಶಕ್ತಿಯಾಗಿ ಹೊರಹೊಮ್ಮುತ್ತಿದೆ ಎಂಬುದನ್ನು ತೋರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ಭಾರತೀಯ ಕ್ರೀಡಾಪಟುಗಳೊಂದಿಗೆ ಸಂವಾದ ನಡೆಸಿದ ಅವರು, ಕ್ರೀಡಾಪಟುಗಳು ಕೇವಲ ಪದಕಗಳನ್ನು ಗೆದ್ದಿಲ್ಲ, ಬದಲಾಗಿ ಕೋಟ್ಯಂತರ ದೇಶವಾಸಿಗಳ ಹೃದಯವನ್ನೂ ಗೆದ್ದಿದ್ದಾರೆ. ಅತ್ಯುನ್ನತ ಸಾಧನೆಗಳನ್ನು ಕೈವಶ ಮಾಡಿಕೊಳ್ಳಲು ದೃಢ ಸಂಕಲ್ಪ ಮತ್ತು ಧೈರ್ಯವೇ ಮೂಲಾಧಾರ ಎಂಬುದನ್ನು ಎಲ್ಲಾ ಪ್ಯಾರಾ-ಕ್ರೀಡಾಪಟುಗಳು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ, 'ಖೇಲೋ ಇಂಡಿಯಾ ಕ್ರೀಡಾ ಸಾಮಗ್ರಿಗಳ ಉತ್ಪಾದನಾ ಯೋಜನೆ'ಗೆ ಅನುಮೋದನೆ ನೀಡಿದೆ ಎಂದು ತಿಳಿಸಿದ ಪ್ರಧಾನಿ, ಕ್ರೀಡಾ ಸಾಮಗ್ರಿಗಳ ಉತ್ಪಾದನಾ ಉದ್ಯಮ, ಹೊಸ ಮಾನದಂಡಗಳನ್ನು ಸ್ಥಾಪಿಸಲು ಇದು ಸೂಕ್ತ ಸಮಯವಾಗಿದೆ. ಯಾವುದೇ ಭಾರತೀಯ ಅಥವಾ ವಿದೇಶಿ ಆಟಗಾರರು ಕ್ರೀಡಾಂಗಣಕ್ಕೆ ಪ್ರವೇಶಿಸಿದಾಗ, ಅವರು ಬಳಸುವ ಕ್ರೀಡಾ ಉಪಕರಣಗಳು, ಉಡುಪುಗಳು ಮತ್ತು ಪಾದರಕ್ಷೆಗಳು 'ಮೇಡ್ ಇನ್ ಇಂಡಿಯಾ' ಆಗಿರಬೇಕು ಎಂದು ಅವರು ಪ್ರತಿಪಾದಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಮಾತನಾಡಿ, ೨೦೧೪ರ ಪ್ಯಾರಾ ಕ್ರೀಡಾಕೂಟದಲ್ಲಿ ದೇಶವು ಕೇವಲ ಮೂರು ಚಿನ್ನದ ಪದಕಗಳನ್ನು ಗೆದ್ದಿದ್ದರೆ, ೨೦೨೯ರಲ್ಲಿ ಭಾರತೀಯ ಪ್ಯಾರಾ-ಕ್ರೀಡಾಪಟುಗಳು ೩೦ ಚಿನ್ನದ ಪದಕ ವಿಜೇತರಾಗಿದ್ದಾರೆ ಎಂದು ಹೇಳಿದರು.

ಜಪಾನ್‌ನ ಐಚಿ-ನಗೋಯಾದಲ್ಲಿ ಈ ವರ್ಷ ನಡೆದ ಏಷ್ಯನ್ ಪ್ಯಾರಾ ಕ್ರೀಡಾಕೂಟದಲ್ಲಿ ಭಾರತ ತನ್ನ ಸಾರ್ವಕಾಲಿಕ ಅತ್ಯುತ್ತಮ ಪ್ರದರ್ಶನ ನೀಡಿದೆ. ಒಟ್ಟು ೬೭ ಭಾರತೀಯ ಪ್ಯಾರಾ

ಕ್ರೀಡಾಪಟುಗಳು ೧೧೪ ಪದಕಗಳನ್ನು ವಿಜೇತರಾಗಿದ್ದು, ಇದರಲ್ಲಿ ೩೦ ಚಿನ್ನ, ೩೫ ಬೆಳ್ಳಿ ಮತ್ತು ೪೯ ಕಂಚಿನ ಪದಕಗಳು ಸೇರಿವೆ.

ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಇಂದು ಕಠ್ಮಂಡುವಿನಲ್ಲಿ ನೇಪಾಳ ಪ್ರಧಾನಿ ಬಲೇಂದ್ರ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಈ ಸಭೆಯಲ್ಲಿ, ಉಭಯ ದೇಶಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳು ಹಾಗೂ ನೆರೆಯ ರಾಷ್ಟ್ರಗಳಾದ ಭಾರತ ಮತ್ತು ನೇಪಾಳದ ನಡುವಿನ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಲಾಯಿತು.

ವಿಕ್ರಮ್ ಮಿಸ್ರಿ ಅವರು ನೇಪಾಳಕ್ಕೆ ಎರಡು ದಿನಗಳ ಅಧಿಕೃತ ಭೇಟಿಯಲ್ಲಿದ್ದು, ಪ್ರಧಾನಿ ಬಲೇಂದ್ರ ಶಾ ಅವರ ಮುಂಬರುವ ಭಾರತ ಭೇಟಿಗೆ ಸಂಬಂಧಿಸಿದ ವಿಷಯಗಳ ಚರ್ಚೆಯು ಈ ಭೇಟಿಯ ಪ್ರಮುಖ ಉದ್ದೇಶವಾಗಿದೆ.

ಇದಕ್ಕೂ ಮುನ್ನ, ವಿಕ್ರಮ್ ಮಿಸ್ರಿ ಅವರು ನೇಪಾಳ ವಿದೇಶಾಂಗ ಕಾರ್ಯದರ್ಶಿ ಅಮೃತ್ ಬಹದ್ದೂರ್ ರೈ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಉಭಯ ದೇಶಗಳ ನಡುವೆ ನಡೆಯಲಿರುವ ಉನ್ನತ ಮಟ್ಟದ ಮಾತುಕತೆ ಹಿನ್ನೆಲೆಯಲ್ಲಿ, ಪರಸ್ಪರ ಆಸಕ್ತಿಯ ಹಲವು ವಿಷಯಗಳ ಕುರಿತು ಇಬ್ಬರೂ ಚರ್ಚಿಸಿದರು.

ಭಾರತ ಮತ್ತು ನೇಪಾಳ, ನಿಕಟ ಐತಿಹಾಸಿಕ ಮತ್ತು ಸಾಂಸ್ಕೃತಿಕ ಬಾಂಧವ್ಯವನ್ನು ಹೊಂದಿವೆ. ಉಭಯ ದೇಶಗಳು ವ್ಯಾಪಾರ, ಮೂಲಸೌಕರ್ಯ, ಇಂಧನ ಮತ್ತು ಅಭಿವೃದ್ಧಿ ಸಹಕಾರ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡುತ್ತಿವೆ.

ನವದೆಹಲಿಯಲ್ಲಿ ನಾಳೆ 'ರಾಷ್ಟ್ರವ್ಯಾಪಿ ಡಿಜಿಟಲ್ ಜೀವ ಪ್ರಮಾಣ ಪತ್ರ' ಅಭಿಯಾನದ ೫ನೇ ಆವೃತ್ತಿಗೆ ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಚಾಲನೆ ನೀಡಲಿದ್ದಾರೆ.

ಕೇಂದ್ರ ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆಯು ಆಯೋಜಿಸಿರುವ ಈ ಅಭಿಯಾನವು ಒಂದು ತಿಂಗಳ ಕಾಲ ನಡೆಯಲಿದ್ದು, ಈ ತಿಂಗಳ ೩೦ರವರೆಗೆ ದೇಶಾದ್ಯಂತ ಮುಂದುವರಿಯಲಿದೆ.

ಡಿಜಿಟಲ್ ತಂತ್ರಜ್ಞಾನದ ಮೂಲಕ, ವಿಶೇಷವಾಗಿ 'ಜೀವನ್ ಪ್ರಮಾಣ್' ಆಪ್‌ನಲ್ಲಿರುವ 'ಮುಖ ಗುರುತಿಸುವಿಕೆ' ತಂತ್ರಜ್ಞಾನವನ್ನು ಬಳಸಿಕೊಂಡು, ಪಿಂಚಣಿದಾರರು ತಮ್ಮ ಜೀವ ಪ್ರಮಾಣ ಪತ್ರಗಳನ್ನು ಸಲ್ಲಿಸುವ ಪ್ರಕ್ರಿಯೆಯನ್ನು ಹೆಚ್ಚು ಸುಲಭ, ಅನುಕೂಲಕರ ಮತ್ತು ಸಮಸ್ಯೆ ಮುಕ್ತವಾಗಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಸಾರ್ವಜನಿಕ ವಲಯದ ಬ್ಯಾಂಕುಗಳು, ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್, ಯುಐಡಿಎಐ, ಪಿಂಚಣಿದಾರರ ಕಲ್ಯಾಣ ಸಂಘಗಳು ಹಾಗೂ ಪ್ರಮುಖ ಸಚಿವಾಲಯಗಳು ಮತ್ತು ಇಲಾಖೆಗಳ ಸಹಯೋಗದೊಂದಿಗೆ ಈ ಅಭಿಯಾನ ನಡೆಸಲಾಗುತ್ತಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಹರಿಯಾಣದ ಅಂಬಾಲಾ ಕಾಂಟ್‌ನಲ್ಲಿ, ೧೮೫೭ರ ಸ್ವಾತಂತ್ರ್ಯ ಸಂಗ್ರಾಮದ ವೀರ ಹುತಾತ್ಮರ ಗೌರವಾರ್ಥ ನಿರ್ಮಿಸಲಾದ ಸ್ಮಾರಕವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ಮನೋಹರ್ ಲಾಲ್, ಹರಿಯಾಣ ಮುಖ್ಯಮಂತ್ರಿ ನಾಯಾಬ್ ಸಿಂಗ್ ಸೈನಿ, ಸಚಿವ ಅನಿಲ್ ವಿಜ್ ಸೇರಿದಂತೆ ಹರಿಯಾಣ ಸರ್ಕಾರದ ಹಲವು ಸಚಿವರು ಉಪಸ್ಥಿತರಿದ್ದರು.

ಸುಮಾರು ೮೦೦ ಕೋಟಿ ರೂಪಾಯಿ ವೆಚ್ಚದಲ್ಲಿ, ಸುಮಾರು ೨೨ ಎಕರೆ ಪ್ರದೇಶದಲ್ಲಿ ನಿರ್ಮಿಸಲಾದ ಈ ಸ್ಮಾರಕದಲ್ಲಿ, ೧೮೫೭ರ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸಂಬಂಧಿಸಿದ ೭೦೦ಕ್ಕೂ ಹೆಚ್ಚು ವೀರರ ಹೆಸರುಗಳನ್ನು ಚಿನ್ನದ ಅಕ್ಷರಗಳಲ್ಲಿ ಕೆತ್ತಲಾಗಿದೆ. ಆಧುನಿಕ ತಂತ್ರಜ್ಞಾನದ ಬಳಕೆಯ ಮೂಲಕ, ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸವನ್ನು ಈ ಸ್ಮಾರಕದಲ್ಲಿ ಜೀವಂತವಾಗಿ ಬಿಂಬಿಸಲಾಗಿದೆ.

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ, ಯುಜಿಸಿಯ ೨೦೨೬ರ ಸಮಾನತೆ ನಿಯಮಾವಳಿಗಳನ್ನು ಪರಿಶೀಲಿಸಲು ವಿಶೇಷ ಸಮಿತಿಯೊಂದನ್ನು ರಚಿಸಲಾಗುವುದು ಎಂದು ಕೇಂದ್ರ ಸರ್ಕಾರ, ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಪೀಠ, ಎಲ್ಲ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ರಕ್ಷಿಸುವುದು ಹಾಗೂ ಯಾವುದೇ ವರ್ಗದ ವಿದ್ಯಾರ್ಥಿಗಳಲ್ಲಿ ತಾರತಮ್ಯ ಅಥವಾ ಅಭದ್ರತೆಯ ಭಾವನೆ ಮೂಡದಂತೆ ನೋಡಿಕೊಳ್ಳುವುದು ಮುಖ್ಯ ಎಂದು ಹೇಳಿದೆ.

ಕೇಂದ್ರ ಸಚಿವ ಮತ್ತು ಬಿಜೆಪಿ ನಾಯಕ ಹರ್ದೀಪ್ ಸಿಂಗ್ ಪುರಿ ಅವರು ಮಧ್ಯಪ್ರದೇಶದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ರಾಜ್ಯಸಭಾ ಸ್ಥಾನಕ್ಕೆ ಕೇಂದ್ರ ಸಚಿವ ಎಲ್.ಮುರುಗನ್ ಅವರು ರಾಜೀನಾಮೆ ನೀಡಿದ ನಂತರ, ಈ ಸ್ಥಾನ ತೆರವಾಗಿತ್ತು.

ಮತದಾರರ ಪಟ್ಟಿಯ 'ವಿಶೇಷ ತೀವ್ರ ಪರಿಷ್ಕರಣೆ' ಪ್ರಕ್ರಿಯೆಯ ಕುರಿತು ಕಾಂಗ್ರೆಸ್ ಪಕ್ಷ ಜನರನ್ನು ದಾರಿತಪ್ಪಿಸುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಆರೋಪಿಸಿದ್ದಾರೆ.

ಬಿಜೆಪಿ ಹಮ್ಮಿಕೊಂಡಿರುವ 'ಪ್ರಜಾಪ್ರಭುತ್ವ ಉಳಿಸಿ - ಅರಾಜಕತೆ ತೊಡೆದುಹಾಕಿ' ಎಂಬ ರಾಷ್ಟ್ರವ್ಯಾಪಿ ಅಭಿಯಾನದ ಭಾಗವಾಗಿ ರಾಜಸ್ಥಾನದ ಜೈಪುರದಲ್ಲಿ ನಡೆದ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಈ ಪರಿಷ್ಕರಣೆ ಪ್ರಕ್ರಿಯೆಯು ಇದೇ ಮೊದಲ ಬಾರಿಗೆ ನಡೆಯುತ್ತಿಲ್ಲ. ಮತದಾರರ ಪಟ್ಟಿಯನ್ನು ದೋಷಮುಕ್ತಗೊಳಿಸುವುದು ಇದರ ಉದ್ದೇಶವಾಗಿದೆ ಎಂದು ಸ್ಪಷ್ಟಪಡಿಸಿದರು.

ಫುಟ್ಬಾಲ್ ದಿಗ್ಗಜ ಕ್ರಿಸ್ಟಿಯಾನೊ ರೊನಾಲ್ಡೊ ಅಂತಾರಾಷ್ಟ್ರೀಯ ಫುಟ್ಬಾಲ್‌ಗೆ ನಿವೃತ್ತಿ ಘೋಷಿಸಿದ್ದಾರೆ.

ಪೋರ್ಚುಗಲ್ ಪರ ಇನ್ನು ಮುಂದೆ ತಾವು ಆಡುವುದಿಲ್ಲ ಎಂದು ೪೧ ವರ್ಷದ ರೊನಾಲ್ಡೊ ತಿಳಿಸಿದ್ದಾರೆ.

ಆರು ವಿಶ್ವಕಪ್‌ಗಳನ್ನು ಒಳಗೊಂಡ ಮತ್ತು ಯುರೋಪಿಯನ್ ಪ್ರಶಸ್ತಿ ಹಾಗೂ ಪುರುಷರ ಸಾರ್ವಕಾಲಿಕ ಅಂತಾರಾಷ್ಟ್ರೀಯ ಗೋಲ್ ಸ್ಕೋರಿಂಗ್ ದಾಖಲೆಯನ್ನು ಒಳಗೊಂಡ ವೃತ್ತಿಜೀವನವನ್ನು ಅವರು ಕೊನೆಗೊಳಿಸಿದ್ದಾರೆ.

ಸೆಪ್ಟೆಂಬರ್ ೨೪ ರಂದು ನೇಷನ್ಸ್ ಲೀಗ್‌ನಲ್ಲಿ ನಡೆದ ಪಂದ್ಯದಲ್ಲಿ ವೇಲ್ಸ್ ವಿರುದ್ಧ ೧-೦ ಅಂತರದ ಜಯದೊಂದಿಗೆ ಪೋರ್ಚುಗಲ್ ಜೊತೆ ರೊನಾಲ್ಡೊ ಅವರ ಅಂತಿಮ ಪ್ರದರ್ಶನ ಕೊನೆಗೊಂಡಿತು. ರೊನಾಲ್ಡೊ ತಮ್ಮ ವೃತ್ತಿಜೀವನದಲ್ಲಿ ಇದುವರೆಗೂ ೯೭೫ ಗೋಲುಗಳನ್ನು ಗಳಿಸಿದ್ದಾರೆ.

_____ ಮುಕ್ತಾಯ _____